ಮೇವಿನ ಬೆಳೆ ಬೆಳೆಯಲಾಗಿದೆ ಹಾಗೂ ಜಾನುವಾರು ನಿರೋಧಕ ಕಂದಕ ನಿರ್ಮಾಣ ಮಾಡಲಾಗಿದೆ.

ಬೆಳೆನಾಶವಾದ ಪ್ರಕರಣದಲ್ಲಿ ರೈತರಿಗೆ ಸರ್ಕಾರದ ಆದೇಶದಂತೆ 2012–13ನೇ ಸಾಲಿನಲ್ಲಿ 143 ಪ್ರಕರಣಗಳಿಗೆ ರೂ. 2,13,875.00 ಗಳ ದಯಾತ್ಮಕ ಧನವನ್ನು ಪಾವತಿಸಲಾಗಿರುತ್ತದೆ. 2013–14ನೇ ಸಾಲಿನಲ್ಲಿ 228 ಪ್ರಕರಣಗಳು ಪರಿಶೀಲನಾ ಹಂತದಲ್ಲಿದ್ದು ` 3,33,400.00 ಗಳ ದಯಾತ್ಮಕ ಧನವನ್ನು ಪಾವತಿಸಲು ಪರಿಶೀಲನಾ ಹಂತದಲ್ಲಿದೆ.

ಕಂದಾಯ ಗ್ರಾಮವನ್ನಾಗಿ ಮಾಡುವುದು:

1055 (1901); ಶ್ರೀ ದೊಡ್ಡಮನಿ ರಾಮಕೃಷ್ಣ ಸಿದ್ದಲಿಂಗಪ್ಪ (ಶಿರಹಟ್ಟಿ)

ಅ) ಶಿರಹಟ್ಟಿ ಮತಕ್ಷೇತ್ರದ ವ್ಯಾಪ್ತಿಯಲ್ಲಿ ಬರುವ ಕೆಲವು ಗ್ರಾಮಗಳನ್ನು ಕಂದಾಯ ಗ್ರಾಮಗಳನ್ನಾಗಿ ಮಾಡುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಆ) ಇದರ ಬಗ್ಗೆ ಸರ್ಕಾರವು ತೆಗೆದುಕೊಂಡಿರುವ ಕ್ರಮಗಳೇನು;

ಇ) ಇನ್ನು ಎಷ್ಟು ದಿನಗಳಲ್ಲಿ ಈ ಕಾರ್ಯವನ್ನು ಪೂರ್ಣಗೊಳಿಸಲಾಗುವುದು?

ಶ್ರೀ ವಿ. ಶ್ರೀನಿವಾಸ ಪ್ರಸಾದ್ (ಮಾನ್ಯ ಕಂದಾಯ ಸಚಿವರು)

ಅ) ಬಂದಿರುತ್ತದೆ.

ಆ) ಶಿರಹಟ್ಟಿ ತಾಲ್ಲೂಕಿನ ಅಕ್ಕಿಗುಂದ ಲಂಬಾಣಿ ತಾಂಡಾ, ಬಸಾಪುರ, ಕುಂದ್ರಳ್ಳಿ ತಾಂಡಾ ಮತ್ತು ಮುನಿಯನ ತಾಂಡಾ ಇವುಗಳನ್ನು ಕಂದಾಯ ಗ್ರಾಮಗಳನ್ನಾಗಿ ಅಧಿಸೂಚಿಸುವಂತೆ ಜಿಲ್ಲಾಧಿಕಾರಿಗಳಿಂದ ಪ್ರಸ್ತಾವನೆಯು ಸ್ವೀಕೃತವಾಗಿರುತ್ತದೆ.

ಈ ಪ್ರಸ್ತಾವನೆಯಲ್ಲಿ ಇವುಗಳನ್ನು ಕಂದಾಯ ಗ್ರಾಮಗಳನ್ನಾಗಿ ಅಧಿಸೂಚಿಸಲು ಅವಶ್ಯಕವಾಗಿರುವ ಸಂಬಂಧಿಸಿದ ಗ್ರಾಮಪಂಚಾಯಿತಿಗಳಿಂದ ನಿರಾಕ್ಷೇಪಣಾ ಪತ್ರ ಪಡೆದಿರುವ ಮಾಹಿತಿ, ಇವುಗಳಲ್ಲಿರುವ ಜನಸಂಖ್ಯೆ ಮತ್ತು ಕುಟುಂಬಗಳ ಸಂಖ್ಯೆಯ ಮಾಹಿತಿ, ಇವುಗಳು ಇಲ್ಲದಿದ್ದರಿಂದ ಈ ಮಾಹಿತಿಗಳನ್ನುಳ್ಳ ಪೂರ್ಣ ಪ್ರಮಾಣದ ಪ್ರಸ್ತಾವನೆಯನ್ನು ಸರ್ಕಾರಕ್ಕೆ ಸಲ್ಲಿಸುವಂತೆ ಜಿಲ್ಲಾಧಿಕಾರಿಗಳು, ಗದಗ ಜಿಲ್ಲೆ, ಗದಗ ಇವರಿಗೆ ದಿನಾಂಕ: 20.05.2014ರ ಪತ್ರದಲ್ಲಿ ಸೂಚಿಸಲಾಗಿರುತ್ತದೆ.

ಇ) ಗ್ರಾಮಪಂಚಾಯಿತಿಗಳಿಂದ ನಿರಾಕ್ಷೇಪಣಾ ಪತ್ರಗಳನ್ನು ಪಡೆಯಬೇಕಾಗುತ್ತದೆ ಹಾಗೂ ಬೇರ್ಪಡಿಸುವ ಸರ್ವೆ ನಂಬರ್‌ಗಳು, ಗ್ರಾಮಗಳ ಬಗ್ಗೆ ಮಾಹಿತಿ, ಗ್ರಾಮಗಳು, ಅರಣ್ಯ, ಖಾಸಗಿ, ಸರ್ಕಾರಿ ಜಮೀನುಗಳಲ್ಲಿವೆಯೇ ಎಂಬ ಬಗ್ಗೆ ಖಚಿತಪಡಿಸಿಕೊಳ್ಳಬೇಕಾಗಿರುತ್ತದೆ. ಆದ್ದರಿಂದ ಇಂತಿಷ್ಟೇ ದಿನಗಳಲ್ಲಿ ಈ ಕಾರ್ಯವನ್ನು ಪೂರ್ಣಗೊಳಿಸಲಾಗುವುದೆಂದು ಹೇಳಲು ಕಷ್ಟಸಾಧ್ಯ.

ಆದಾಗ್ಯೂ ಜಿಲ್ಲಾಧಿಕಾರಿಗಳು, ಗದಗ ಜಿಲ್ಲೆ, ಗದಗ ಇವರಿಂದ ಪೂರ್ಣ ಪ್ರಮಾಣದ ಮಾಹಿತಿ ಸ್ವೀಕೃತವಾದ ನಂತರ ನಿಯಮಾನುಸಾರ ಪರಿಶೀಲಿಸಿ ಇವುಗಳನ್ನು ಕಂದಾಯ ಗ್ರಾಮಗಳನ್ನಾಗಿ ಅಧಿಸೂಚಿಸಲಾಗುವುದು.

ಸ್ಮಶಾನ ಇಲ್ಲದ ಗ್ರಾಮಗಳು

1056 (1902); ಶ್ರೀ ದ್ಯೊಡ್ಡಮನಿ ರಾಮಕೃಷ್ಣ ಸಿದ್ದಲಿಂಗಪ್ಪ (ಶಿರಹಟ್ಟಿ)

ಅ) ಶಿರಹಟ್ಟಿ ಮತಕ್ಷೇತ್ರದಲ್ಲಿ ಬರುವ ಸ್ಮಶಾನ ಇಲ್ಲದ ಗ್ರಾಮಗಳೆಷ್ಟು;

ಆ) ಈ ವಿಷಯ ಸರ್ಕಾರದ ಗಮನಕ್ಕೆ ಬಂದಿದೆಯೇ, ಬಂದಿದ್ದಲ್ಲಿ, ಸರ್ಕಾರ ತೆಗೆದುಕೊಳ್ಳುವ ಕ್ರಮಗಳೇನು;